## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Hero Wind Energy Private Limited ಕಂಪನಿಗೆ ಬೀದರ್ ಜಿಲ್ಲೆಯ ಹುಮನಾಬಾದ್ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 30 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

ಓದಲಾಗಿದೆ: 1. ಹಂಚಿಕೆ ಸಮಿತಿ ಸಭೆ ನಡವಳಿ ದಿನಾಂಕ: 16.04.2015.

2. ಸರ್ಕಾರದ ಪತ್ರ ಸಂಖ್ಯೆ: ಇಎನ್ 79 ಎನ್‌ಸಿಇ 2015 ದಿನಾಂಕ: 02.02.2016.

3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: 1222–ಹೆಚ್.

* * *

ಪ್ರಸ್ತಾವನೆ :-

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ದಿನಾಂಕ: 16.04.2015 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಯಲ್ಲಿ M/s Hero Wind Energy Private Limited ಕಂಪನಿಗೆ ಬೀದರ್ ಜಿಲ್ಲೆಯ ಹುಮನಾಬಾದ್ ತಾಲ್ಲೂಕಿನ ಚಿತಗಪ್ಪ, ಬಿಲ್‌ಪೇರ, ಇಟ್ಗಾ, ಮುದ್ನಾಲ್, ರಾಂಪುರ, ಮುಸ್ತಾರಿ, ಕೋಡಂಬಲ್, ಘಾತಂಪುರ, ಉದ್ಬಾಲ್, ಕೃಷ್ಣಾಪುರವಾಡಿ, ಮುಸ್ತಾರಿವಾಡಿ, ಮದರ್ಗಿ, ಮದರ್ಗಿ ತಾಂಡ, ಭದ್ರಾಪುರ ತಾಂಡ ಮತ್ತು ಮುಕಿನ್ ತಾಂಡ ಗ್ರಾಮಗಳಲ್ಲಿ 30 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಘಟಕ ಸ್ಥಾಪಿಸುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸಮಿತಿಯು ಎರಡು ವರ್ಷಗಳಲ್ಲಿ ವಾಸ್ತವಿಕ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಸಲ್ಲಿಸುವ ಷರತ್ತಿಗೊಳಪಟ್ಟು 30 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆಗೆ ಶಿಫಾರಸ್ಸು ಮಾಡಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರ ಸರ್ಕಾರದ ಪತ್ರದಲ್ಲಿ M/s Hero Wind Energy Private Limited ಕಂಪನಿಗೆ ಬೀದರ್ ಜಿಲ್ಲೆಯ ಹುಮನಾಬಾದ್ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 30 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ಎರಡು ವರ್ಷಗಳಲ್ಲಿ ವಾಸ್ತವಿಕ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಸಲ್ಲಿಸುವ ಷರತ್ತಿಗೊಳಪಟ್ಟು ತತ್ವಶಃ ಅನುಮತಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರ ಸರ್ಕಾರದ ಪತ್ರದಲ್ಲಿ M/s Hero Wind Energy Private Limited ಕಂಪನಿಗೆ ಬೀದರ್ ಜಿಲ್ಲೆಯ ಹುಮನಾಬಾದ್ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 30 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸುವ ಸಂಬಂಧ ವಾಸ್ತವಿಕ ಸಾಮರ್ಥ್ಯಕ್ಕೆ ನಿಗದಿತ ಶುಲ್ಕದೊಂದಿಗೆ ಯೋಜನಾ ವರದಿಯನ್ನು ಕ್ರೆಡಲ್‌ಗೆ ಸಲ್ಲಿಸಿರುವುದನ್ನು ಪರಿಶೀಲಿಸಿದ್ದು, M/s Hero Wind Energy Private Limited ಕಂಪನಿಯು ದಿನಾಂಕ : 09.05.2013 ರಂದು CIN No. U40300DL2013PTC251839 ರನ್ವಯ Registrar of Companies, Ministry of Corporate Affairs, Government of India, New Delhi ಇಲ್ಲಿ ನೊಂದಾವಣೆಯಾಗಿರುವುದಾಗಿ ತಿಳಿಸಿರುತ್ತಾರೆ ಹಾಗೂ ದಿನಾಂಕ: 31.03.2016 ಕ್ಕೆ ಸದರಿ

....2)

ಕಂಪನಿಯ ನೆಟ್‌ವರ್ತ್ ರೂ.365.88 ಕೋಟಿಗಳಾಗಿರುವುದಾಗಿ ಚಾರ್ಟೆಡ್ ಅಕೌಂಟೆಂಟ್ ರವರು ದೃಢೀಕರಿಸಿರುವುದಾಗಿ ತಿಳಿಸುತ್ತಾ, M/s Hero Wind Energy Private Limited ಕಂಪನಿಗೆ ಬೀದರ್ ಜಿಲ್ಲೆಯ ಹುಮನಾಬಾದ್ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 30 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ವಂತ ಬಳಕೆ / ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಸಲುವಾಗಿ ಯೋಜನೆಗೆ ಸಂಬಂಧಿಸಿದ ಯೋಜನಾ ವರದಿ ತಾಂತ್ರಿಕ ವಿವರಗಳು ಸ್ಥಳದ ಮಾಹಿತಿ ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ಈ ಕೆಳಕಂಡ ಶೆಡ್ಯೂಲ್‌ನಲ್ಲಿರುವಂತೆ ಹಂಚಿಕೆ ಮಾಡುವ ಸಂಬಂಧ ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

Geographical area description for 30 MW capacity wind power project of M/s Hero Wind Energy Private Limited

| Sl. No | Toposheet No. | Proposed capacity in MW | Near by villages of the proposed area and district | Geographical area description of the project |
|---|---|---|---|---|
| 1 | 56 G / 2 & 56 G/6 | 30 MW (30 Nos x 1000 kw) | Chitgappa, Bilkhera, Itga, Mudnal, Kodambal, Rampura, Mustari, Fathampura, Udbal, Krihnapurawadi, Mustariwadi, Madargi, Bhadrapur Tanda, Madargi Tanda and Mukin Tanda Villages in Humnabad Taluk, Bidar District | Identified area is covered by private land. The road crossing towards Chitgoppa to Humnabad and it consists of many open scrub, stony waste and water bodies. The area is held in the following Geographical co-ordinates:<br><br>Part A:<br><br>Lat: 17°37'54.4" to 17°43'7.45''N<br>Long: 77°09'39.50'' to 77°15'0''E<br>Ridge Peaks: 637, 651, 624, 612, 625, 635 and 607m Amsl.<br><br>Part B:<br><br>Lat: 17°35'22.8" to 17°40'34.2''N<br>Long: 77°15'0'' to 77°20'52.5''E<br>Ridge Peaks: 612, 616, 630, 640, 610 and 633m Amsl. |
| | **Total** | **30 MW** | | |

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಇಎನ್ 557 ಎನ್‌ಸಿಇ 2018, ಬೆಂಗಳೂರು, ದಿನಾಂಕ: 20.10.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, M/s Hero Wind Energy Private Limited ಕಂಪನಿಗೆ ಬೀದರ್ ಜಿಲ್ಲೆಯ ಹುಮನಾಬಾದ್ ತಾಲ್ಲೂಕಿನ ಚಿತಗಪ್ಪ, ಬಿಲ್‌ಖೇರ, ಇಟ್ಗಾ, ಮುದ್ನಾಲ್, ರಾಂಪುರ, ಮುಸ್ತಾರಿ, ಕೋಡಂಬಲ್, ಫಾತಂಪುರ, ಉದ್ಬಾಲ್, ಕೃಷ್ಣಾಪುರವಾಡಿ, ಮುಸ್ತಾರಿವಾಡಿ, ಮದರ್ಗಿ, ಮದರ್ಗಿ ತಾಂಡ, ಭದ್ರಾಪುರ ತಾಂಡ ಮತ್ತು ಮುಕಿನ್ ತಾಂಡ ಗ್ರಾಮಗಳಲ್ಲಿ 30 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಶೆಡ್ಯೂಲ್‌ನಲ್ಲಿರುವಂತೆ ಸ್ವಂತ ಬಳಕೆ / ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಸಲುವಾಗಿ ಈ ಕೆಳಕಂಡ ಷರತ್ತುಗೊಳಪಟ್ಟು ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

....3)

Geographical area description for 30 MW capacity wind power project of M/s Hero Wind Energy Private Limited

| Sl. No | Toposheet No. | Proposed capacity in MW | Near by villages of the proposed area and district | Geographical area description of the project |
|---|---|---|---|---|
| 1 | 56 G / 2 & 56 G/6 | 30 MW (30 Nos x 1000 kw) | Chitgappa, Bilkhera, Itga, Mudnal, Kodambal, Rampura, Mustari, Fathampura, Udbal, Krihnapurawadi, Mustariwadi, Madargi, Bhadrapur Tanda, Madargi Tanda and Mukin Tanda Villages in Humnabad Taluk, Bidar District | Identified area is covered by private land. The road crossing towards Chitgoppa to Humnabad and it consists of many open scrub, stony waste and water bodies. The area is held in the following Geographical co-ordinates:<br>Part A:<br>Lat: 17°37'54.4" to 17°43'7.45''N<br>Long: 77°09'39.50'' to 77°15'0''E<br>Ridge Peaks: 637, 651, 624, 612, 625, 635 and 607m Amsl.<br>Part B:<br>Lat: 17°35'22.8" to 17°40'34.2''N<br>Long: 77°15'0'' to 77°20'52.5''E<br>Ridge Peaks: 612, 616, 630, 640, 610 and 633m Amsl. |
| | Total | 30 MW | | |

ಷರತ್ತುಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಪ್ರಸರಣ ಮಾಡುವ ಕುರಿತು ಕೆ.ಪಿ.ಟಿ.ಸಿ.ಎಲ್ ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

...4)